155-72-3

(3)

(19)

04/03/2025

**<u>ಮಾನ್ಯ ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಸ್.ಎಲ್. ಭೋಜೇಗೌಡ ಹಾಗೂ ಶ್ರೀ ಕೆ. ವಿವೇಕಾನಂದ ಇವರು ನಿಯಮ-72ರ ಅಡಿಯಲ್ಲಿ ಕೋರಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ:</u>**

**<u>ಪ್ರಶ್ನೆ:</u>**

ರಾಜ್ಯ ಸರ್ಕಾರದ ಕ್ರೀಡಾ ಇಲಾಖೆಯಿಂದ ಸರ್ಕಾರಿ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳಿಗೆ 2023 ರಿಂದ ಇಲ್ಲಿಯವರೆಗೆ ಕ್ರೀಡಾ ಸಾಮಗ್ರಿಗಳನ್ನು ಬಹಳ ಕಡಿಮೆ ಪ್ರಮಾಣದಲ್ಲಿ ವಿತರಿಸುತ್ತಿರುವುದರಿಂದ ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಹೆಚ್ಚಿನ ರೀತಿಯಲ್ಲಿ ಕ್ರೀಡೆಯನ್ನು ಪ್ರೋತ್ಸಾಹಿಸಲು ಸರ್ಕಾರ ಇನ್ನು ಹೆಚ್ಚಿನ ಅನುದಾನವನ್ನು ನೀಡಿ ವಿದ್ಯಾರ್ಥಿಗಳಿಗೆ ಬೇಕಾಗಿರುವ ಎಲ್ಲಾ ಕ್ರೀಡಾ ಸಾಮಗ್ರಿಗಳನ್ನು ನೀಡಿ ರಾಜ್ಯದಲ್ಲಿ ಕ್ರೀಡೆಯನ್ನು ಹೆಚ್ಚಿನ ರೀತಿಯಲ್ಲಿ ಮಂದುವರಿಸಿಕೊಂಡು ಹೋಗಬೇಕಾಗಿರುವುದರಿಂದ ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರ ಗಮನವನ್ನು ಸೆಳೆಯಲು ಬಯಸುತ್ತೇವೆ.

**<u>ಉತ್ತರ:</u>**

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಲ್ಲಿ ಸರ್ಕಾರಿ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳಿಗೆ ಕ್ರೀಡಾ ಸಾಮಗ್ರಿಗಳನ್ನು ವಿತರಿಸುವ ಯೋಜನೆಗಳು ಜಾರಿಯಲ್ಲಿರುವುದಿಲ್ಲ.

ಆದರೆ, ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆಯಲ್ಲಿ ನಮ್ಮೂರ ಶಾಲೆ ನಮ್ಮೂರ ಯುವಜನರು ಯೋಜನೆ ಜಾರಿಯಲ್ಲಿದ್ದು, ಸದರಿ ಯೋಜನೆಯಡಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಶಿಕ್ಷಣ ಇಲಾಖೆ ಹಾಗೂ ಮಾನ್ಯತೆ ಪಡೆದಿರುವ ಕ್ರೀಡಾ ಸಂಸ್ಥೆಗಳು ಆಯೋಜಿಸುವ ತಾಲ್ಲೂಕು, ಜಿಲ್ಲೆ, ರಾಜ್ಯ ಮತ್ತು ರಾಷ್ಟ್ರಮಟ್ಟದ ಕ್ರೀಡಾಕೂಟಗಳಲ್ಲಿ ಉತ್ತಮ ಸಾಧನೆ ತೋರುವ ಕ್ರೀಡಾಪಟುಗಳನ್ನು ಹೊಂದಿರುವ ಸರ್ಕಾರಿ ಶಾಲೆಗಳನ್ನು ಗುರುತಿಸಿ ಪ್ರೋತ್ಸಾಹವಾಗಿ ರೂ.1.00 ಲಕ್ಷ ಅನುದಾನ ನೀಡಲಾಗುವುದು. ಈ ಪೈಕಿ ರೂ.10,000.00ಗಳ ಪ್ರೋತ್ಸಾಹಧನವನ್ನು ಶಾಲೆಯ ದೈಹಿಕ ಶಿಕ್ಷಕರಿಗೆ ಮತ್ತು ಅಗತ್ಯ ಕ್ರೀಡಾ ಸಾಮಗ್ರಿಗಳ ಖರೀದಿಗಾಗಿ ರೂ.90,000.00 ಗಳನ್ನು ಎಸ್.ಡಿ.ಎಂ.ಸಿ. ಖಾತೆಗೆ ಬಿಡುಗಡೆ ಮಾಡಲಾಗುತ್ತದೆ. ಅನುದಾನ ಲಭ್ಯತೆಯ ಅನುಸಾರ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಪರಿಶಿಷ್ಟ ಜಾತಿ ಮತ್ತುಪರಿಶಿಷ್ಟ ಪಂಗಡದ ಉಪಯೋಜನೆಯಡಿ 2024-25ನೇ ಸಾಲಿನಲ್ಲಿ ಕರ್ನಾಟಕ ವಸತಿಶಿಕ್ಷಣ ಸಂಸ್ಥೆಯ (ಕ್ರೈಸ್) 159 ವಸತಿ ಶಾಲೆಗಳ ವಿದ್ಯಾರ್ಥಿಗಳಿಗೆ ಕ್ರೀಡೆಯ ಬಗ್ಗೆ ಹೆಚ್ಚಿನ ಪ್ರೋತ್ಸಾಹ ನೀಡುವ ಉದ್ದೇಶದಿಂದ ದೈನಂದಿನ ಅಭ್ಯಾಸಗಳಿಗೆ ಅವಶ್ಯಕವಿರುವ ಕ್ರೀಡಾಸಾಮಗ್ರಿಗಳನ್ನು ಒಂದು ವಸತಿ ಶಾಲೆಗೆ ರೂ.84,010/- ಗಳಂತೆ ಒಟ್ಟು ರೂ.1,33,57,590/- ಗಳ ವೆಚ್ಚದಲ್ಲಿ ಕ್ರೀಡಾಸಾಮಗ್ರಿಗಳನ್ನು ಒದಗಿಸಲಾಗಿದೆ.

ವೈಎಸ್‌ಡಿ-ಇಬಿಬಿ/11/2025

(ಸಿದ್ದರಾಮಯ್ಯ)
ಮುಖ್ಯಮಂತ್ರಿ